**All India Radio: Bangalore**
**Regional Bulletin In Kannada**
**27.11.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**27.11.2025 / 2.30  p.m.**

**<>><><*><><<>**

**ಮುಖ್ಯಾಂಶಗಳು**

೧. ಅತಿವೃಷ್ಟಿ ಸಂತ್ರಸ್ತ ರೈತರಿಗೆ ೧ ಸಾವಿರದ ೩೩ ಕೋಟಿ ರೂಪಾಯಿ ವಿಶೇಷ ಪ್ಯಾಕೇಜ್ ಘೋಷಿಸಿದ ರಾಜ್ಯ ಸರ್ಕಾರ

೨. ಪ್ರಧಾನಿ ನರೇಂದ್ರ ಮೋದಿ ನಾಳೆ ಉಡುಪಿ ಶ್ರೀ ಕೃಷ್ಣ ಮಠಕ್ಕೆ ಭೇಟಿ; ಕನಕನ ಕಿಂಡಿಗೆ ಕನಕ ಕವಚ ಸಮರ್ಪಣೆ

೩. ನಾಯಕತ್ವ ಬಿಕ್ಕಟ್ಟು ಹಿನ್ನೆಲೆ; ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಅವರನ್ನು ದೆಹಲಿಗೆ ಆಹ್ವಾನಿಸಿದ ಕಾಂಗ್ರೆಸ್ ಹೈಕಮಾಂಡ್

೪. ಕೋಲಾರದಲ್ಲಿ ಆರ್‌ಟಿಒ ಅಧಿಕಾರಿಗಳ ಕಾರ್ಯಾಚರಣೆ; ೩೨ ಕ್ಕೂ ಹೆಚ್ಚು ಐಷಾರಾಮಿ ಬಸ್‌ಗಳು ವಶಕ್ಕೆ

೫. ಬೆಂಗಳೂರಿನ ಕಬ್ಬನ್ ಪಾರ್ಕ್‌ನಲ್ಲಿ ಇಂದಿನಿಂದ ೧೧ ದಿನಗಳ ಕಾಲ ಹೂಗಳ ಹಬ್ಬ -೨೦೨೫

**<>><><*><><<>**

ಪ್ರಸ್ತುತ ವರ್ಷದ ಮಾನ್ಸೂನ್ ಅವಧಿಯಲ್ಲಿ ಭಾರೀ ಮಳೆ ಮತ್ತು ಪ್ರವಾಹದಿಂದ ಬೆಳೆ ಹಾನಿಗೊಳಗಾದ ರೈತರಿಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿ ಸಬ್ಸಿಡಿಗಾಗಿ ೧ ಸಾವಿರದ ೩೩ ಕೋಟಿ ೬೦ ಲಕ್ಷ ರೂಪಾಯಿ ವಿಶೇಷ ಪ್ಯಾಕೇಜ್ ಘೋಷಿಸಲಾಗಿದೆ. ಬೆಳೆ ಹಾನಿ ಸಂಭವಿಸಿದ ೧೪ ಲಕ್ಷದ ೨೪ ಸಾವಿರ ರೈತರ ಬ್ಯಾಂಕ್ ಖಾತೆಗಳಿಗೆ ಒಟ್ಟು ೧ ಸಾವಿರದ ೩೩ ಕೋಟಿ ೬೦ ಲಕ್ಷ ರೂಪಾಯಿ ಹೆಚ್ಚುವರಿ ಪರಿಹಾರ ಒದಗಿಸುವ ಕಾರ್ಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಬೆಳೆ ಹಾನಿಗೊಳಗಾದ ರೈತರಿಗೆ ಹೆಚ್ಚಿನ ನೆರವು

ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಇನ್‌ಪುಟ್ ಸಬ್ಸಿಡಿಗಳ ದರಗಳನ್ನು ಹೆಚ್ಚಿಸಿದೆ. ಗರಿಷ್ಠ ೨ ಹೆಕ್ಟೇರ್‌ಗೆ ಸೀಮಿತವಾಗಿ, ಮಳೆಯಾಶ್ರಿತ ಬೆಳೆಗಳಿಗೆ ಹೆಕ್ಟೇರ್ ಒಂದಕ್ಕೆ ೮ ಸಾವಿರದ ೫೦೦ ರೂಪಾಯಿಯಿಂದ ೧೭ ಸಾವಿರ, ನೀರಾವರಿ ಬೆಳೆಗಳಿಗೆ ಹೆಕ್ಟೇರ್ ಒಂದಕ್ಕೆ ೧೭ ಸಾವಿರ ರೂಪಾಯಿಯಿಂದ ೨೫ ಸಾವಿರದ ೫೦೦ ರೂಪಾಯಿ ಹಾಗೂ ಬಹು ವಾರ್ಷಿಕ ಬೆಳೆಗಳಿಗೆ ಹೆಕ್ಟೇರ್ ಒಂದಕ್ಕೆ ೨೨ ಸಾವಿರದ ೫೦೦ ರೂಪಾಯಿಯಿಂದ ೩೧ ಸಾವಿರ ರೂಪಾಯಿಗೆ ಹೆಚ್ಚಿಸಲಾಗಿದೆ ಎಂದು ತಿಳಿಸಿದ್ದಾರೆ. ಮುಖ್ಯವಾಗಿ ತೊಗರಿ ಬೇಳೆ ೫.೩೭ ಲಕ್ಷ ಹೆಕ್ಟೇರ್, ಹೆಸರು ಕಾಳು ೨.೬೩ ಲಕ್ಷ ಹೆಕ್ಟೇರ್, ಹತ್ತಿ ೨.೬೮ ಲಕ್ಷ ಹೆಕ್ಟೇರ್ ಮತ್ತು ಮೆಕ್ಕೆಜೋಳ ೧.೨೧ ಲಕ್ಷ ಹೆಕ್ಟೇರ್ ಹಾನಿ ಉಂಟಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಒಂಭತ್ತು ಜಿಲ್ಲೆಗಳಲ್ಲಿ ಹೆಚ್ಚಿನ ಬೆಳೆ ಹಾನಿ ಉಂಟಾಗಿದ್ದು, ಮುಖ್ಯವಾಗಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಬೆಳೆಗಳು ಕೊಯ್ಲಿನ ಹಂತಕ್ಕೆ ಬಂದ ಸಂದರ್ಭದಲ್ಲಿ ಭಾರೀ ಮಳೆಯಿಂದ ಹೆಚ್ಚಿನ ಹಾನಿ ಸಂಭವಿಸಿದೆ. ಕೃಷ್ಣಾ ಮತ್ತು ಭೀಮಾ ಜಲಾನಯನ ಪ್ರದೇಶಗಳಲ್ಲಿ ನಿರಂತರ ಒಳ ಹರಿವು ಹೆಚ್ಚಳದಿಂದ ಕಲಬುರಗಿ, ಯಾದಗಿರಿ ಮತ್ತು ಬೀದರ್ ಜಿಲ್ಲೆಗಳಲ್ಲಿ ತೊಗರಿ ಮತ್ತು ಹತ್ತಿ ಬೆಳೆಗಳಿಗೆ ವ್ಯಾಪಕ ಹಾನಿ ಉಂಟಾಗಿದೆ ಎಂದು ಹೇಳಿದ್ದಾರೆ. ಬೆಳೆ ಹಾನಿಯನ್ನು ನಿಖರವಾಗಿ ಖಚಿತಪಡಿಸಲು ಜಂಟಿ ಸಮೀಕ್ಷೆ ನಡೆಸಿ ಅಂದಾಜಿಸಲಾಗಿದೆ. ಎಲ್ಲಾ ದತ್ತಾಂಶಗಳನ್ನು ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲಾಗಿದ್ದು, ಭೂಮಿ ಮತ್ತು ಫ್ರೂಟ್ಸ್ ತಂತ್ರಾಂಶದಲ್ಲಿ ಸಂಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ಉಡುಪಿಯ ಶ್ರೀ ಕೃಷ್ಣ ಮಠಕ್ಕೆ ನಾಳೆ ಭೇಟಿ ನೀಡಲಿದ್ದಾರೆ. ಶ್ರೀಕೃಷ್ಣನ ದರ್ಶನ ಪಡೆಯಲಿರುವ ಅವರು, ಲಕ್ಷಕಂಠ ಗೀತಾ ಪಾರಾಯಣದಲ್ಲಿ ಭಾಗವಹಿಸಲಿದ್ದಾರೆ. ಕೃಷ್ಣ ಗರ್ಭಗುಡಿಯ ಮುಂಭಾಗದಲ್ಲಿರುವ ಸುವರ್ಣ ತೀರ್ಥ ಮಂಟಪವನ್ನು ಉದ್ಘಾಟಿಸಲಿದ್ದಾರೆ. ಜೊತೆಗೆ ಪವಿತ್ರ ಕನಕನ ಕಿಂಡಿಗೆ ಕನಕ ಕವಚವನ್ನು ಅರ್ಪಿಸಲಿದ್ದಾರೆ. ಲಕ್ಷಕಂಠ ಗೀತಾ ಪಾರಾಯಣ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಸಾಧುಗಳ, ವಿದ್ವಂಸರು ಹಾಗೂ ಭಕ್ತರು ಸೇರಿದಂತೆ ಒಂದು ಲಕ್ಷಕ್ಕೂ ಹೆಚ್ಚು ಮಂದಿ ಭಾಗವಹಿಸಿ ಭಕ್ತಿ ಸಭೆ ಹಾಗೂ ಭಗವದ್ಗೀತೆಯನ್ನು ಒಟ್ಟಾಗಿ ಪಠಿಸಲಿದ್ದಾರೆ. ಮಂಗಳೂರಿಗೆ ವಿಶೇಷ ವಿಮಾನದಲ್ಲಿ

ಆಗಮಿಸುವ ಅವರು, ಬಳಿಕ ಉಡುಪಿಗೆ ತೆರಳಲಿದ್ದಾರೆ. ಪ್ರಧಾನಿ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯಲ್ಲಿ ಬಿಗಿಬಂದೋಬಸ್ತ್ ಏರ್ಪಡಿಸಲಾಗಿದೆ. ಉಡುಪಿ ಜಿಲ್ಲೆಯಲ್ಲಿ ಡ್ರೋನ್ ಹಾರಾಟ ನಿಷೇಧಿಸಲಾಗಿದೆ. ಶ್ರೀಕೃಷ್ಣ ಮಠಕ್ಕೆ ಏಳು ಗಂಟೆಗಳ ಕಾಲ ಭಕ್ತರಿಗೆ ದರ್ಶನ ನಿರ್ಬಂಧಿಸಲಾಗಿದೆ. ಪ್ರಧಾನಿ ಕಾರ್ಯಕ್ರಮದಲ್ಲಿ ಭಾಗವಹಿಸುವವರು, ಯಾವುದೇ ರೀತಿಯ ಬ್ಯಾಗ್, ನೀರಿನ ಬಾಟಲಿ, ಧ್ವಜ, ಬಲೂನ್, ಪಟಾಕಿ ತರುವಂತಿಲ್ಲ ಎಂದು ಜಿಲ್ಲಾಡಳಿತ ತಿಳಿಸಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಸೇನಾ ಹೆಲಿಕಾಪ್ಟರ್‌ಗಳು ಭದ್ರತೆ ಕುರಿತಂತೆ ಈಗಾಗಲೇ ರಿಹರ್ಸಲ್ ನಡೆಸಿವೆ.

**<>><><*><><<>**

ರಾಜ್ಯದಲ್ಲಿನ ನಾಯಕತ್ವ ಬಿಕ್ಕಟ್ಟನ್ನು ಪರಿಹರಿಸಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ನವದೆಹಲಿಗೆ ಆಹ್ವಾನಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದ ಉನ್ನತ ನಾಯಕರೊಂದಿಗಿನ ಸಭೆಯ ಬಳಿಕ ಬಿಕ್ಕಟ್ಟನ್ನು ಸೌಹಾದಯುತವಾಗಿ ಬಗೆಹರಿಸಲಾಗುವುದು ಎಂದು ಹೇಳಿದ್ದಾರೆ. ಇದೇ ೨೯ರಂದು ದೆಹಲಿಯಲ್ಲಿ ಈ ಕುರಿತಂತೆ ಮಹತ್ವದ ಸಭೆ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭಾಗವಹಿಸಲಿದ್ದಾರೆ. ಅಂದು ರಾಜ್ಯದಲ್ಲಿನ ನಾಯಕತ್ವ ಬಿಕ್ಕಟ್ಟನ್ನು ಬಗೆಹರಿಸಲು ಅಂತಿಮ ನಿರ್ಧಾರ ತೆಗೆದುಕೊಳ್ಳುವ ಸಾದ್ಯತೆಯಿದೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ.

**<>><><*><><<>**

ಕಾಂಗ್ರೆಸ್‌ನಲ್ಲಿ ಅಧಿಕಾರ ಹಸ್ತಾಂತರ ಕುರಿತಂತೆ ನಡೆಯುತ್ತಿರುವ ಬಿಕ್ಕಟ್ಟಿನ ನಡುವೆಯೇ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾಮಾಜಿಕ ಮಾಧ್ಯಮದಲ್ಲಿ ಕೊಟ್ಟ ಮಾತು ಉಳಿಸಿಕೊಳ್ಳುವುದೇ ದೊಡ್ಡ ಶಕ್ತಿ ಎಂದು ಪೋಸ್ಟ್ ಮಾಡಿದ್ದಾರೆ.

ಜಗತ್ತಿನ ಅತಿದೊಡ್ಡ ಶಕ್ತಿ ಎಂದರೆ ಕೊಟ್ಟ ಮಾತನ್ನ ಉಳಿಸಿಕೊಳ್ಳುವುದು. ನ್ಯಾಯಾಧೀಶರಾಗಲಿ, ಅಧ್ಯಕ್ಷರಾಗಲಿ, ತಾವಾಗಲಿ, ಬೇರೆ ಯಾರೇ ಆಗಿರಲಿ ನುಡಿದಂತೆ ನಡೆಯಬೇಕು. ಜೊತೆಗೆ ಮಾತು ಉಳಿಸಿಕೊಳ್ಳುವುದು ಮುಖ್ಯ ಎಂದು ಬರೆದುಕೊಂಡಿದ್ದಾರೆ. ಎಐಸಿಸಿ ಹಿರಿಯ ನಾಯಕ ಮಲ್ಲಿಕಾರ್ಜುನ್ ಖರ್ಗೆ ಅವರು

ದೆಹಲಿಗೆ ಆಹ್ವಾನಿಸಿದ ಕೂಡಲೇ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಈ ಸಂದೇಶ ನೀಡಿದ್ದಾರೆ.

**<>><><*><><<>**

ಸರ್ಕಾರಕ್ಕೆ ಲಕ್ಷಾಂತರ ರೂಪಾಯಿ ತೆರಿಗೆ ವಂಚಿಸಿ ಸಂಚರಿಸುತ್ತಿದ್ದ ಅಂತರ್‌ರಾಜ್ಯ ಖಾಸಗಿ ಬಸ್‌ಗಳ ವಿರುದ್ಧ ಸಾರಿಗೆ ಇಲಾಖೆ ಅಧಿಕಾರಿಗಳು ಕೋಲಾರದಲ್ಲಿ ಕಾರ್ಯಾಚರಣೆ ನಡೆಸಿ, ೩೨ಕ್ಕೂ ಹೆಚ್ಚು ಐಷಾರಾಮಿ ಬಸ್‌ಗಳನ್ನು ವಶಕ್ಕೆ ಪಡೆದಿದ್ದಾರೆ. ಬೆಂಗಳೂರು-ಚೆನ್ನೈ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು, ಬೇರೆ ರಾಜ್ಯಗಳಲ್ಲಿ ನೋಂದಣಿಯಾಗಿ, ಆಲ್ ಇಂಡಿಯಾ ಟೂರಿಸ್ಟ್ ಪರವಾನಿಗೆಯಡಿಯಲ್ಲಿ ರಾಜ್ಯದಲ್ಲಿ ನಿಯಮಬಾಹಿರವಾಗಿ ಓಡಾಡುತ್ತಿದ್ದ ಸ್ಲೀಪರ್ ಕೋಚ್ ಮತ್ತು ಹೈಟೆಕ್ ಬಸ್‌ಗಳನ್ನು ಜಪ್ತಿ ಮಾಡಿದ್ದಾರೆ. ಜಂಟಿ ಆಯುಕ್ತೆ ಗಾಯತ್ರಿ ದೇವಿ ನೇತೃತ್ವದ ೧೫ ಆರ್‌ಟಿಓ ಅಧಿಕಾರಿಗಳ ತಂಡ ಕಾರ್ಯಾಚರಣೆ ನಡೆಸಿವೆ. ಬಳಿಕ ಪ್ರತಿಕ್ರಿಯಿಸಿದ ಜಂಟಿ ಆಯುಕ್ತೆ ಗಾಯತ್ರಿ ದೇವಿ, ಬಸ್ ಮಾಲೀಕರು ಆದಾಯದ ಮೇಲೆ ಮಾತ್ರ ಗಮನ ನೀಡಿ, ಪ್ರಯಾಣಿಕರ ಸುರಕ್ಷತೆಗೆ ನಿರ್ಲಕ್ಷ್ಯ ತೋರುತ್ತಿದ್ದರು ಎಂದು ತಿಳಿಸಿದ್ದಾರೆ. ಜಪ್ತಿ ಕಾರ್ಯಾಚರಣೆ ವೇಳೆ ಬಸ್‌ಗಳಲ್ಲಿದ್ದ ಪ್ರಯಾಣಿಕರನ್ನು ತಕ್ಷಣವೇ ಸಾರಿಗೆ ಇಲಾಖೆಯ ಅಧಿಕಾರಿಗಳು ಕೆಎಸ್‌ಆರ್‌ಟಿಸಿ ಬಸ್‌ಗಳಿಗೆ ಸ್ಥಳಾಂತರಿಸುವ ಮೂಲಕ ಪ್ರಯಾಣಿಕರಿಗೆ ತೊಂದರೆಯಾಗದಂತೆ ನೋಡಿಕೊಂಡಿದ್ದಾರೆ.

**<>><><*><><<>**

ಫಲ ಪುಷ್ಪ ಪ್ರದರ್ಶನದಲ್ಲಿ ಬಳಸಲಾಗಿರುವ ಹೂವುಗಳನ್ನು ತ್ಯಾಜ್ಯ ವಾಗಿಸದೇ ಅವುಗಳನ್ನು ಒಣಗಿಸಿ ಅಥವಾ ಸಂಸ್ಕರಿಸಿ ಮರುಬಳಕೆಗೆ ಯೋಗ್ಯವಾದ ವಸ್ತುಗಳನ್ನು ತಯಾರಿಸಬೇಕೆಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ತೋಟಗಾರಿಕೆ ಇಲಾಖೆಯಿಂದ ಕಬ್ಬನ್ ಪಾರ್ಕ್‌ನಲ್ಲಿ ೧೧ ದಿನಗಳ ಕಾಲ ಏರ್ಪಡಿಸಿರುವ "ಹೂಗಳ ಹಬ್ಬ-೨೦೨೫" ಕಲೆ ಸಂಸ್ಕೃತಿಯ ಸಮಾಗಮ ಉದ್ಘಾಟಿಸಿದ ಅವರು, ಫಲ ಪುಷ್ಪ ಪ್ರದರ್ಶನ ವೀಕ್ಷಿಸಿದರು. ತೋಟಗಾರಿಕೆ ಇಲಾಖೆಯು ವಿಶೇಷವಾಗಿ ಇಲ್ಲಿ ಮಕ್ಕಳಿಗಾಗಿ ಪುಷ್ಪ ಪ್ರದರ್ಶನ ಏರ್ಪಡಿಸಿದೆ. ಸುಂದರ ಪ್ರಕೃತಿಯಲ್ಲಿ ಆಯೋಜಿಸಲಾಗಿರುವ ಪುಷ್ಪ ಪ್ರದರ್ಶನಕ್ಕೆ ಎಲ್ಲರೂ ಆಗಮಿಸಿ

ವೀಕ್ಷಿಸುವ ಮೂಲಕ ಉದ್ಯಾನವನದ ಸೌಂದರ್ಯವನ್ನು ಕಾಪಾಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

**<>><><*><><<>**

ಮಂಗಳೂರಿನ ರಂಗ ಅಧ್ಯಯನ ಕೇಂದ್ರ ಸಂತ ಅಲೋಶಿಯಸ್ ಕಾಲೇಜು ಹಾಗೂ ಅರೆಹೊಳೆ ಪ್ರತಿಷ್ಠಾನ ಸಹಯೋಗದಲ್ಲಿ ಇಂದು ಅಂತಾರಾಷ್ಟ್ರೀಯ ನಾಟಕೋತ್ಸವ ನಡೆಯಲಿದೆ. ರೋಹಿತ್ ಬೈಕಾಡಿ ನಿರ್ದೇಶನದ ಸಂತ ಅಲೋಶಿಯಸ್ ರಂಗ ಅಧ್ಯಯನ ಕೇಂದ್ರದ ಸೈರನ್ ನಾಟಕ ಇಂದು ಪ್ರದರ್ಶನಗೊಳ್ಳಲಿದೆ. ನಾಳೆ ಅನುಷ್ ಶೆಟ್ಟಿ ನಿರ್ದೇಶನದ ನಿರ್ದಿಗಂತ ಮೈಸೂರು ತಂಡದಿಂದ ಪೊಲಿಟಕಲ್ ಪ್ರಿಸನರ್ಸ್ ನಾಟಕ ನಡೆಯಲಿದೆ.

**<>><><*><><<>**

ವಿದ್ಯುತ್ ಕಂಬ, ಟ್ರಾನ್ಸ್‌ಫಾರ್ಮರ್ ಸೇರಿದಂತೆ ಇತರೆ ಯಾವುದೇ ಕಾರ್ಯ ನಿರ್ವಹಿಸುವಾಗ ಇಂಧನ ಇಲಾಖೆಯ ಅಧಿಕಾರಿಗಳು ಆಯಾ ಭಾಗದ ಜನಪ್ರತಿನಿಧಿಗಳ ಗಮನಕ್ಕೆ ತಂದು ಕೆಲಸ ಮಾಡಬೇಕು ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ. ಕೊಪ್ಪಳ ಜಿಲ್ಲಾ ಪಂಚಾಯತ್‌ನಲ್ಲಿ ನಿನ್ನೆ ನಡೆದ ಸಭೆಯಲ್ಲಿ ಯಾವುದೇ ಸಮಸ್ಯೆಗಳಿದ್ದರೆ ಮೇಲಾಧಿಕಾರಿಗಳ ಗಮನಕ್ಕೆ ತರಬೇಕೆಂದು ಸೂಚಿಸಿದ್ದಾರೆ.

**<>><><*><><<>**

ಬೆಂಗಳೂರಿನ ನೆಹರು ತಾರಾಲಯದಲ್ಲಿ ನಾಳೆ ವಿಜ್ಞಾನ ಪ್ರದರ್ಶನ ಏರ್ಪಡಿಸಲಾಗಿದೆ. ಬೆಳಗ್ಗೆ ೧೦ ಗಂಟೆಯಿಂದ ಸಂಜೆ ೪.೩೦ ರವರೆಗೆ ಕಾರ್ಯಕ್ರಮ ನಡೆಯಲಿದೆ. ಮುಖ್ಯ ಅತಿಥಿಗಳಾಗಿ ಪ್ರಯೋಗ ಇನ್ಸ್ಟಿಟ್ಯೂಟ್ ಆಫ್ ಎಜುಕೇಷನ್ ರಿಸರ್ಚ್ ಸೆಂಟರ್‌ನ ಹಿರಿಯ ವಿಜ್ಞಾನಿ ಡಾ.ಕರುಣಾ ಸಿಂಹ ಭಾಗವಹಿಸಲಿದ್ದಾರೆ. ಅಲ್ಟ್ರಾ ಸೌಂಡ್ ಲೆವಿಟೇಷನ್, ಕೊಅಂಡ ಪರಿಣಾಮ, ಎಡಿ ಬ್ರೇಕಿಂಗ್ ಸೇರಿದಂತೆ ಹಲವು ವಿಜ್ಞಾನಕ್ಕೆ ಸಂಬಂಧಿಸಿದ ಪ್ರದರ್ಶನ ನಡೆಯಲಿವೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ ><><<>**